ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 20–03–2020

## ಪತ್ರಿಕಾ ಪ್ರಕಟಣೆ

# ಸದನದಲ್ಲಿ ಇಂದು

# ಮರಳು ನೀತಿ ಜಾರಿಗೆ ರೂಪುರೇಷೆ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ): ರಾಜ್ಯದಲ್ಲಿ ಮರಳುನೀತಿ ಜಾರಿಗೆ ತರುವ ಕುರಿತು ರೂಪುರೇಷೆಗಳನ್ನು ಸಿದಗದ್ದಪಡಿಸಲಾಗುತ್ತಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಸಚಿವ ಸಿ.ಸಿ. ಪಾಟೀಲ್ ಅವರು ತಿಳಿಸಿದರು.

ಇಂದು ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಪುತ್ತೂರಿನ ಶಾಸಕರಾದ ಸಂಜೀವ್ ಮಠಂದೂರು ವರ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಅವರು ಕರಾವಳಿ ಭಾಗದಲ್ಲಿ ಮರಳು ಗಣಿಗಾರಿಕೆ ಅತ್ಯಂತ ಮುಖ್ಯವಾದ ವಿಷಯವಾಗಿದ್ದು ಸುಸ್ಥಿರ ಮರಳು ಗಣಿಗಾರಿಕೆ ನಿರ್ವಹಣೆ ಮಾರ್ಗಸೂಚಿಗಳ ಅನ್ವಯ ಮರಳನ್ನು ತೆರವುಗೊಳಿಸಲು ಹಾಗೂ ಜಲಾಶಯ/ಆಣೆಕಟ್ಟು/ಬ್ಯಾರೇಜ್/ ಕಿಂಡಿ ಆಣೆಕಟ್ಟಿನ ಹಿನ್ನೀರಿನ ಪ್ರದೇಶಗಳಲ್ಲಿ ಹೂಳಿನೊಂದಿಗೆ ಸಂಗ್ರಹವಾಗಿರುವ ಮರಳನ್ನು ತೆರವುಗೊಳಿಸಲು ಅವಕಾಶಗಳನ್ನು ಕಲ್ಪಿಸಲಾಗಿದೆ.

2019ರ ಸರ್ಕಾರದ ಆದೇಶದ ಮೇರೆಗೆ ಪ್ರವಾಹದಿಂದ ನದಿಗಳ ಪಕ್ಕದ ಕೃಷಿ ಜಮೀನುಗಳಲ್ಲಿ ಸಂಗ್ರಹವಾಗುವ ಮರಳನ್ನು ತೆರವುಗೊಳಿಸಲು ಸಹ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಈ ಸಮಯದಲ್ಲಿ ಅನೇಕ ಸದಸ್ಯರು ರಾಜ್ಯದಲ್ಲಿ ಸಮಗ್ರ ಮರಳು ನೀತಿಯ ಜಾರಿಗೆ ಒತ್ತಾಯಿಸಿದರು.

## ಬಿ.ಪಿ.ಎಲ್ ಕಂಪನಿಗೆ ನೀಡಿರುವ ಭೂಮಿಯ ಬಗ್ಗೆ ಕ್ರಮಕ್ಕೆ ಒತ್ತಾಯ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ): ಕರ್ನಾಟಕ ಕೈಗಾರಿಕಾ ಪ್ರದೇಶಾಬಿವೃದ್ಧಿ ಮಂಡಳಿಯಿಂದ ನೆಲಮಂಗಲ ವಿಧಾನಸಭಾ ಕ್ಷೇತ್ರದ ದಾಬಸ್ ಪೇಟೆ 1 ನೇ ಹಂತದ ಕೈಗಾರಿಕಾ ಪ್ರದೇಶದ ನಿವೇಶನ ಸಂಖ್ಯೆ:1 ಮತ್ತು 2-ಪಾರ್ಟ್ ರಲ್ಲಿ ಒಟ್ಟು 149 ಎಕರೆ 5.5 ಗುಂಟೆ ಜಮೀನನ್ನು ಮೆ॥ ಬಿ.ಪಿ.ಎಲ್ ಲಿ.ರವರಿಗೆ ಹಂಚಿಕೆ ಮಾಡಲಾಗಿದ್ದು, ಈ ಕಂಪನಿಗೆ ಸರ್ಕಾರ ನೀಡಿರುವ ಜಾಗವನ್ನು ನೀಡಿದ ಉದ್ದೇಶಕ್ಕೆ ಬಳಸಿಕೊಳ್ಳಲಾರದ ಆರೋಪವಿದ್ದು ಪ್ರಸ್ತುತ ಅದು ನ್ಯಾಯಾಲಯದಲ್ಲಿ ಎಂದು  ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವ ಜಗದೀಶ ಶೆಟ್ಟರ್ ಅವರು ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ನೆಲಮಂಗಲ ಶಾಸಕ ಡಾ.ಶ್ರೀನಿವಾಸಮೂರ್ತಿ. ಕೆ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿ ಮಾತನಾಡಿ ಬಿ.ಪಿ.ಎಲ್ ಕಂಪನಿಗೆ ನೀಡಿರುವ ಜಾಗದ ಕ್ರಯಪತ್ರವನ್ನು ರದ್ದು ಮಾಡಲು ಕಾನೂನಿನ ಮೊರೆ ಹೋಗುವುದಾಗಿ ಹೇಳಿದರು.

ಸದರಿ ಕಂಪನಿಯು ಹಂಚಿಕೆ ಪಡೆದಿರುವ ವಿಸ್ತೀರ್ಣದಲ್ಲಿ ಶೇಕಡಾ 5.12 ರಷ್ಟು ಜಮೀನನ್ನು ಕಟ್ಟಡಕ್ಕಾಗಿ ಬಳಸಿಕೊಂಡಿರುತ್ತದೆ.

ಮೆ॥ ಬಿ.ಪಿ.ಎಲ್ ಲಿ. ಕಂಪನಿಯು ಹಂಚಿಕೆ ಪಡೆದಿರುವ ವಿಸ್ತೀರ್ಣದಲ್ಲಿ ಶೇಕಡಾ 5.12 ರಷ್ಟು ಜಮೀನನ್ನು ಕಟ್ಟಡಕ್ಕಾಗಿ ಬಳಸಿಕೊಂಡಿರುತ್ತದೆ. ಕೆ.ಐ.ಎ.ಡಿ.ಬಿ.ಯು ದಿನಾಂಕ: 28.11.2006 ರಂದು ಶುದ್ಧ ಕ್ರಯಪತ್ರವನ್ನು ಮಾಡಿಕೊಟ್ಟಿರುತ್ತದೆ.

ಕೆ.ಐ.ಎ.ಡಿ.ಬಿ.ಯಿಂದ ಕ್ರಯಪತ್ರ ಪಡೆದ ನಂತರ ಮೆ॥ ಬಿ.ಪಿ.ಎಲ್ ಲಿ.ರವರು ಈ ಕೆಳಕಂಡ ಸಂಸ್ಥೆಗಳಿಗೆ ಜಮೀನನ್ನು ಮಾರಾಟ ಮಾಡಿದ್ದು, ಈ ಕಂಪನಿ/ಘಟಕಗಳು ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

## 11 ನಗರಸಭೆ, 17 ಪುರಸಭೆ ಹಾಗೂ 20 ಪಟ್ಟಣ ಪಂಚಾಯಿತಿಗಳಲ್ಲಿ ಸೋಲಾರ್ ಬೀದಿ ದೀಪ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ): ರಾಜ್ಯದಲ್ಲಿ ಪ್ರಸ್ತುತ 48 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಂದಾಜು 2060 ಸೋಲಾರ್ ಬೀದಿ ದೀಪಗಳನ್ನು ಅಳವಡಿಸಲಾಗಿದ್ದು, ಇವುಗಳ

ಉಪಯೋಗದಿಂದ, ವಾರ್ಷಿಕ ಅಂದಾಜು 2,59,404 ಯೂನಿಟ್ಸ್(kwh) ಉಳಿತಾಯವಾಗಬಹುದಾಗಿದ್ದು, ಇದರ ವಾರ್ಷಿಕ ಉಳಿತಾಯದ ಒಟ್ಟು ಮೊತ್ತ ಸುಮಾರು ರೂ.13.61 ಲಕ್ಷಗಳು ಎಂದು ಅಂದಾಜಿಸಿದೆ ಎಂದು ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು ನಾರಾಯಣ ಗೌಡ ಅವರು ತಿಳಿಸಿದರು.

ಅವರು ಇಂದು ವಿಧಾನಸಭೆಯಲ್ಲಿ ಶಾಸಕ ಎಸ್.ಎನ್.ನಾರಾಯಣಸ್ವಾಮಿ.ಕೆ.ಎಂ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿ ಮಾತನಾಡಿ ರಾಜ್ಯದಲ್ಲಿ ಪ್ರಸ್ತುತ 59 ನಗರಸಭೆಗಳು, 116 ಪುರಸಭೆಗಳು ಹಾಗೂ 95 ಪಟ್ಟಣ ಪಂಚಾಯಿತಿಗಳಿರುತ್ತವೆ. ಅವುಗಳಲ್ಲಿ 11 ನಗರಸಭೆ, 17 ಪುರಸಭೆ ಹಾಗೂ 20 ಪಟ್ಟಣ ಪಂಚಾಯಿತಿಗಳಲ್ಲಿ ಭಾಗಶಃ ಸೋಲಾರ್ ಬೀದಿ ದೀಪಗಳನ್ನು ಅಳವಡಿಸಲಾಗಿದೆ.

ಪ್ರತಿ ಸೋಲಾರ್ ಬೀದಿ ದೀಪಗಳಿಗೆ, ಬೀದಿ ದೀಪದ ಸಾಮರ್ಥ್ಯಕ್ಕನುಗುಣವಾಗಿ ಪ್ರತ್ಯೇಕವಾಗಿ ಸೋಲಾರ್ ಪ್ಯಾನೆಲ್ಗಳನ್ನು ಅಳವಡಿಸುತ್ತಿದ್ದು ಮತ್ತು ಸದರಿ ಪ್ಯಾನಲ್‌ನ ಸಾಮರ್ಥ್ಯವು ಕಡಿಮೆ ಪ್ರಮಣದ್ದಾಗಿರುವುದರಿಂದ ಹಾಗೂ ಸುರಕ್ಷತೆ ದೃಷ್ಟಿಯಿಂದ ಅವುಗಳು ನೇರವಾಗಿ ವಿದ್ಯುತ್ ಗ್ರಿಡ್‌ಗೆ ಸಂಪರ್ಕಿತವಾಗಿರುವುದಿಲ್ಲವಾದ್ದರಿಂದ ಇವುಗಳಿಗೆ ಪತ್ಪತ್ತಿಯಾದ ಹೆಚ್ಚುವರಿ ವಿದ್ಯುತ್ ನೇರವಾಗಿ ಕೈಗಾರಿಕೆಗಳಿಗೆ ಅಥವಾ ರೈತನ ಕೃಷಿ ವಿದ್ಯುತ್ ಪಂಪ್‌ಸೆಟ್ಗಳಿಗೆ ಸರಬರಾಜು ಮಾಡಲು ಬರುವುದಿಲ್ಲ. ಆದರೆ ಸೋಲಾರ್ ಬೀದಿ ದೀಪಗಳು ಗ್ರಿಡ್‌ನ ವಿದ್ಯುತ್‌ನ್ನು ಉಪಯೋಗಿಸದೇ ಇರುವುದರಿಂದ ಸದರಿ ಬೀದಿ ದಿಪಗಳಿಗೆ ಉಪಯೋಗಿಸಬಹುದಾದ ವಿದ್ಯುತ್ ಪ್ರಮಾಣದಷು ವಿದ್ಯುಚ್ಛಕ್ತಿಯೂ ಇಂದನ ಇಲಾಖೆಗೆ ಉಳಿತಾಯವಾಗುತ್ತದೆ.ಸದರಿ ಉಳಿತಾಯವಾದ ವಿದುತ್‌ನ್ನು ಕೈಗಾರಿಕೆಗಳು ಮತ್ತು ರೈತರ ಕೃಷಿ ಪಂಪ್‌ಸೆಟ್‌ಳಿಗೆ ಉಪಯೋಗಿಸಲ್ಪಡುತ್ತಿದೆ ಎಂದು ಹೇಳಿದರು.

## ಆದ್ಯತಾ ಪಡಿತರ ಚೀಟಿಗೆ 5 ಕೆ.ಜಿ ಅಕ್ಕಿ-2 ಕೆ.ಜಿ ಗೋದಿ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ): ರಾಜ್ಯದಲ್ಲಿ ೨೦೨೦-೨೧ನೇ ಸಾಲಿನಿಂದ ಆದ್ಯತಾ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬದ ಪ್ರತಿ ಸದಸ್ಯರುಗಳಿಗೆ ೫ ಕೆ.ಜಿ ಅಕ್ಕಿ ಹಾಗೂ ಪ್ರತಿ ಕುಟುಂಬಕ್ಕೆ ೨ ಕೆ.ಜಿ ಗೋದಿಯನ್ನು ಪ್ರತಿ ತಿಂಗಳು ನೀಡಲು ಆಯವ್ಯಯದಲ್ಲಿ ಘೋಷಿಸಲಾಗಿದೆ ಎಂದು

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಸಚಿವ ಕೆ.ಗೋಪಾಲಯ್ಯ ಅವರು ತಿಳಿಸಿದರು.

ವಿಧಾನಸಭೆಯಲ್ಲಿಂದು ಅರಕಲಗೂರು ಶಾಸಕ ರಾಮಸ್ವಾಮಿ.ಎ.ಟಿ ಅವರ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಸಚಿವರು ೨೦೧೯-೨೦ನೇ ಸಾಲಿನಲ್ಲಿ ರಾಜ್ಯದಲ್ಲಿನ ಪಡಿತರ ಚೀಟಿದಾರರಿಗೆ ಸಾರ್ವಜನಿಕ ವಿತರಣಾ ಪದ್ದತಿಯಡಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. ಅಂತ್ಯೋದಯ ಪಡಿತರ ಚೀಟಿಗೆ ೩೫ ಕೆ.ಜಿ. ಅಕ್ಕಿಯನ್ನು ಹಾಗೂ ಆದ್ಯತಾ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬದ ಪ್ರತಿ ಸದಸ್ಯನಿಗೆ ೭ ಕೆ.ಜಿ ಅಕ್ಕಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

ಆದ್ಯತೇತರ ಪಡಿತರ ಚೀಟಿಯನ್ನು ಹೊಂದಿದ್ದು, ಪಡಿತರ ಧಾನ್ಯವನ್ನು ಪಡೆಯಲು ಸಹಮತಿಯನ್ನು ನೀಡಿರುವ ಏಕ ಸದಸ್ಯ ಪಡಿತರ ಕುಟುಂಬಕ್ಕೆ ೫ ಕೆ.ಜಿ ಅಕ್ಕಿಯನ್ನು, ಇಬ್ಬರು ಹಾಗೂ ಅದಕ್ಕಿಂತ ಹೆಚ್ಚಿನ ಸದಸ್ಯರು ಹೊಂದಿರುವ ಪಡಿತರ ಕುಟುಂಬಕ್ಕೆ ೧೦ ಕೆ.ಜಿ ಅಕ್ಕಿಯನ್ನು ರೂ. ೧೫/- ದರದಲ್ಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.

## ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಆನ್‌ಲೈನ್‌ನಲ್ಲಿ ಬಿದರಿ ಕಲಾಕೃತಿ ಮಾರಾಟಕ್ಕೆ ಕ್ರಮ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ): ಭೌಗೋಳಿಕ ಗುರುತಿನ ನೋಂದಣಿ ಹೊಂದಿರುವ ರಾಜ್ಯದ ಬಿದರಿ ಕಲಾಕೃತಿಗಳನ್ನು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮತ್ತು ಆನ್‌ಲೈನ್ ಮುಖಾಂತರ ಮಾರಾಟ ಮಾಡುವ ಮೂಲಕ ಸದರಿ ಕರಕುಶಲ ಕಲೆಯ ಕುಶಲಕರ್ಮಿಗಳಿಗೆ ಹೆಚ್ಚಿನ ಮಾರುಕಟ್ಟೆ ಸೌಲಭ್ಯವನ್ನು ಒದಗಿಸಲು ಪ್ರಯತ್ನ ಮಾಡಲಾಗುತ್ತಿದೆ ಎಂದು ಮುಜುರಾಯಿ ಸಚಿವ ಕೋಟಾ ಶ್ರೀನಿವಾಸ ಪೂಜಾರಿ ಅವರು ತಿಳಿಸಿದರು.

ಅವರು ಇಂದು ವಿಧಾನಪರಿಷತ್ತಿನಲ್ಲಿ ಸದಸ್ಯರಾದ ವಿಜಯ ಸಿಂಗ್ ಅವರ ಪ್ರಶ್ನೆಗೆ ಮುಖ್ಯ ಮಂತ್ರಿಗಳ ಪರವಾಗಿ ಉತ್ತರಿಸಿ ಮಾತನಾಡಿದ ಅವರು ಬೀದರ್ ಜಿಲ್ಲೆಯಲ್ಲಿ ವಿಶ್ವವಿಖ್ಯಾತ ಬಿದ್ರಿ ಕಲೆಯಲ್ಲಿ ಸುಮಾರು ೩೦೦ ಕುಟುಂಬಗಳು ತೊಡಗಿದ್ದು, ಇದರಲ್ಲಿ ೧೦೮ ಕರಕುಶಲಕರ್ಮಿಗಳು ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮದಲ್ಲಿ ನೊಂದಾಯಿಸಿಕೊಂಡಿದ್ದಾರೆ ಎಂದು ಹೇಳಿದರು.

ನಿಗಮದವತಿಯಿಂದ ಬಿದರಿ ಕರಕುಶಲಕರ್ಮಿಗಳಿಗೆ ನೀಡುತ್ತಿರುವ ಅನೇಕ ಸೌಲಭ್ಯಗಳ ಕುರಿತು ಸಭೆಗೆ ಮಾಹಿತಿ ನೀಡಿದರು.

## ಪರಿಸರ ಸ್ನೇಹಿ ವಾಹನಗಳ ಖರೀದಿಗೆ ಸರ್ಕಾರ ಚಿಂತನೆ – ಸಾರಿಗೆ ಸಚಿವರ ಉತ್ತರ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ) : ಬೆಂಗಳೂರು ನಗರದಲ್ಲಿ ವಾಯುಮಾಲಿನ್ಯ ಹೆಚ್ಚಾಗುತ್ತಿದ್ದು, ಮಾಲಿನ್ಯ ತಡೆಗಟ್ಟಲು ಪರಿಸರ ಸ್ನೇಹಿ ವಾಹನಗಳು – ಬಿ.ಎಸ್. 6 ಮಾದರಿಯ ವಾಹನಗಳನ್ನು ಖರೀದಿಸಲು ಕ್ರಮ ವಹಿಸಲಾಗುತ್ತಿದೆ ಎಂದು ಸಾರಿಗೆ ಸಚಿವ ಲಕ್ಷ್ಮಣ ಸಂಗಪ್ಪ ಸವದಿ ತಿಳಿಸಿದರು.

ವಿಧಾನಪರಿಷತ್ತಿನಲ್ಲಿ ನಡೆದ ಪ್ರಶ್ನೋತ್ತರ ವೇಳೆ ಪಿ.ಆರ್. ರಮೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಎಲ್ಲಾ ಸರ್ಕಾರಿ ಹಾಗೂ ಖಾಸಗಿ ವಾಹನಗಳನ್ನು ಕಡ್ಡಾಯವಾಗಿ ತಪಾಸಣೆಗೆ ಒಳಪಡಿಸಲು ಕ್ರಮ ವಹಿಸಲಾಗಿದೆ. ಕೆ.ಎಸ್.ಆರ್.ಟಿ.ಸಿ ಮತ್ತು ಬಿಎಂಟಿಸಿ ಬಸ್ಸುಗಳ ವಾಹನದ ಇಂಜಿನ್‌ಗಳು ಬಿ.ಎಸ್. 4 ರ ಮಾದರಿಯಾಗಿವೆ. ಇವುಗಳನ್ನು ನಿಲ್ಲಿಸುವ ಸಂಬಂಧ ಏಪ್ರಿಲ್ 1ರಿಂದ ಬಿ.ಎಸ್. 6 ಮಾದರಿಯ ವಾಹನಗಳ ಖರೀದಿಗೆ ಕ್ರಮ ವಹಿಸಲಾಗಿದೆ. ಬಿ.ಎಂ.ಟಿ.ಸಿ. ಸಂಸ್ಥೆಗೆ ಹೊಸ 400 ಎಲೆಕ್ಟ್ರಿಕ್ ವಾಹನಗಳ ಖರೀದಿಗೆ ಈಗಾಗಲೇ ಟೆಂಡರ್ ಕರೆಯಲಾಗಿದೆ. 100 ಕಡೆ ಚಾರ್ಜಿಂಗ್ ಪಾಯಿಂಟ್ ಅಳವಡಿಸಲು ಗುರುತಿಸಲಾಗಿದ್ದು, ಈಗಾಗಲೇ ಇವುಗಳ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

ನಿಗದಿತ ಪ್ರಮಾಣಕ್ಕಿಂತ ಹೆಚ್ಚು ಹೊಗೆ ಹೊರಸೂಸುವ ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ. ವಾಹನಗಳನ್ನು ಸಹ ಪ್ರವರ್ತನ ಸಮಯದಲ್ಲಿ ತಪಾಸಣೆ ನಡೆಸಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. ಕನಾಟಕ ಮೋಟಾರು ವಾಹ ನಿಯಮಾವಳಿ 1989ರ 231 ಬಿ ಪ್ರಕಾರ ಬೆಂಗಳೂರು ನಗರದಲ್ಲಿ 415 ವಾಯುಮಾಲಿನ್ಯ ತಪಾಸಣಾ ಕೇಂದ್ರಗಳನ್ನು ತೆರೆಯಲು ಅನುಮತಿಸಲಾಗಿದೆ. ಹೊಸದಾಗಿ ನೋಂದಣಿಯಾದ ವಾಹನಗಳಿಗೆ ಒಂದು ವರ್ಷ ಅವಧಿಗೆ ವಾಯುಮಾಲಿನ್ಯ ನಿಯಂತ್ರಣ ಪ್ರಮಾಣ ಪತ್ರದಿಂದ ವಿನಾಯಿತಿ ಇದೆ. ನಂತರ ಎಲ್ಲಾ ಬಿ.ಎಸ್. 3 ಮತ್ತು ಬಿ.ಎಸ್. 4 ಮಾದರಿಯ ವಾಹನಗಳ ಪಿಯುಸಿ ಪ್ರಮಾಣ ಪತ್ರ ಪಡೆಯುವುದು ಕಡ್ಡಾಯವಾಗಿರುತ್ತದೆ. ಬಿ.ಎಸ್. 4 ಮಾದರಿಯ ವಾಹನಗಳು 12 ತಿಂಗಳ ಅವಧಿಗೆ ವಾಯು ಮಾಲಿನ್ಯ ತಪಾಸಣಾ ಪ್ರಮಾಣ ಪತ್ರಗಳನ್ನು ವಿಸ್ತರಿಸಲಾಗುತ್ತಿದೆ ಇದಲ್ಲದೆ,

ಬೆಂಗಳೂರು ನಗರದಲ್ಲಿ ಸಂಚರಿಸುವ 2–ಸ್ಟ್ರೋಕ್ ಆಟೋರಿಕ್ಷಾಗಳಿಗೆ 2020, ಮಾರ್ಚ್ ಅಂತ್ಯದ ಅವಧಿಗೆ ಮಾತ್ರ ರಸ್ತೆಗಳಲ್ಲಿ ಸಂಚರಿಸಲು ಅನುಮತಿಸಲಾಗಿರುತ್ತದೆ.

ಸಾರ್ವಜನಿಕ ವಾಹನಗಳಾದ ಕೆ.ಎಸ್.ಆರ್.ಟಿ.ಸಿ, ಬಿ.ಎಂ.ಟಿ.ಸಿ. ಆಟೋ, ಟ್ಯಾಕ್ಸಿ ಮುಂತಾದ ವಾಹನಗಳ ಚಾಲಕರು ಮೊಬೈಲ್‌ನಲ್ಲಿ ಮಾತನಾಡಿಕೊಂಡು ಚಾಲನೆ ಮಾಡುತ್ತಿರುವ ಬಗ್ಗೆ ಪ್ರವರ್ತನ ಸಮಯದಲ್ಲಿ ತಪಾಸಣೆ ನಡೆಸಿ ದಂಡ ವಸೂಲಿ ಮಾಡಲು ನಿಯಮಾನುಸಾರ ಕ್ರಮ ವಹಿಸಲಾಗಿದೆ ಎಂದು ಸಚಿವರು ತಿಳಿಸಿದರು.

## ನೇಕಾರರ ಸಾಲ ಮನ್ನ ಮಾಡಲು ಸರ್ಕಾರ ಚಿಂತನೆ – ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಉತ್ತರ .

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ) : ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘಗಳು, ಸಹಕಾರ ಬ್ಯಾಂಕುಗಳು / ರಾಷ್ಟ್ರೀಕೃತ ಬ್ಯಾಂಕುಗಳಿಂದ ನೀಡಲಾದ ಸಾಲದ ಕುರಿತಾಗಿ ಜಿಲ್ಲಾವಾರು ಮಾಹಿತಿ ಪಡೆದು ಮನ್ನ ಮಾಡಲು ಸರ್ಕಾರ ಕ್ರವಹಿಸಿದೆ ಎಂದು ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ತಿಳಿಸಿದರು.

ವಿಧಾನಪರಿಷತ್ತಿನಲ್ಲಿ ನಡೆದ ಪ್ರಶ್ನೋತ್ತರ ವೇಳೆ ಹೆಚ್.ಎಂ. ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, 2019–20ನೇ ಸಾಲಿಗೆ ಸರ್ಕಾರದಿಂದ ನೇಕಾರರ ಸಾಲದ ಮೇಲೆ ರೂ. 227.86 ಲಕ್ಷಗಳ ಬಡ್ಡಿ ಮನ್ನಾ ಮಾಡಲಾಗಿದೆ. 9765 ಫಲಾನುಭವಿಗಳಿಗೆ ಸಾಲದ ಮೇಲಿನ ಬಡ್ಡಿ ಮನ್ನಾ ಅನುಕೂಲವಾಗಿದೆ ಎಂದು ಸಚಿವರು ತಿಳಿಸಿದರು.

ಜವಳಿ ಉದ್ಯಮವನ್ನು ಉತ್ತೇಜಿಸುವ ಸಂಬಂಧ ಬೇರೆ ಬೇರೆ ರಾಜ್ಯಗಳು ರೂಪಿಸಿಕೊಂಡಿರುವ ಜವಳಿ ನೀತಿಯನ್ನು ಅಧ್ಯಯನ ಮಾಡಿ ಹೊಸ ಟೆಕ್ಸ್‌ಟೈಲ್ ಪಾಲಿಸಿ ಜಾರಿಗೆ ತರಲಾಗುವುದು. ಜವಳಿ ಉದ್ಯಮವನ್ನು ಉತ್ತೇಜಿಸುವ ಸಲುವಾಗಿ ಟೆಕ್ಸ್‌ಟೈಲ್ ಪಾರ್ಕ್ ಸ್ಥಾಪನೆ ಮಾಡಲು ಕ್ರಮ ವಹಿಸಲಾಗುವುದು. ಜವಳಿ ಉದ್ಯಮದ ಮೇಲೆ ಹೂಡಿಕೆ ಮಾಡಿದ ಬಂಡವಾಳದ ಮೇಲೆ ಶೇಕಡ 30 ರಷ್ಟು ಸಹಾಯಧನ ನೀಡಲು ಕ್ರಮವಹಿಸಲಾಗುವುದು ಅಲ್ಲದೆ ನೇಕಾರರಿಗೆ ಪ್ರತಿ ತಿಂಗಳು ಒಂದು ಸಾವಿರದಂತೆ 5ವರ್ಷ ನೀಡಲು ಚಿಂತಿಸಲಾಗಿದೆ ಎಂದು ಸಚಿವರು ತಿಳಿಸಿದರು.

**ಮಲೈಮಹದೇಶ್ವರ ಬೆಟ್ಟಕ್ಕೆ ಹವಾನಿಯಂತ್ರಿತ ಬಸ್ ಸೌಲಭ್ಯ ವ್ಯವಸ್ಥೆಗೆ ಕ್ರಮ – ಸಾರಿಗೆ ಸಚಿವರ ಉತ್ತರ .**

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ) : ಮಲೈಮಹದೇಶ್ವರ ಬೆಟ್ಟಕ್ಕೆ ವೋಲ್ವೋ ಬಸ್ ಬದಲಾಗಿ ಇತರೆ ಮಾದರಿಯ ಹವನಿಯಂತ್ರಿತ ಬಸ್ ಸೌಲಭ್ಯ ಕಲ್ಪಿಸಲು ಕ್ರಮಕೈಗೊಳ್ಳಲಾಗುವುದು ಎಂದು ಸಾರಿಗೆ ಸಚಿವ ಲಕ್ಷ್ಮಣ ಸಂಗಪ್ಪ ಸವದಿ ತಿಳಿಸಿದರು.

ವಿಧಾನಪರಿಷತ್ತಿನಲ್ಲಿ ನಡೆದ ಪ್ರಶ್ನೋತ್ತರ ವೇಳೆ ಮರಿತಿಬ್ಬೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಶ್ರೀ ಮಲೈಮಹದೇಶ್ವರ ಬೆಟ್ಟದ ರಸ್ತೆಯು ತಿರುವುಗಳನ್ನು ಹೊಂದಿರುವ ಕಡಿದಾದ ರಸ್ತೆಯಾಗಿರುವುದರಿಂದ ಸದರಿ ರಸ್ತೆಗಳಲ್ಲಿ ಬೆಂಗಳೂ ಮತ್ತು ಮೈಸೂರಿನಿಂದ ಹವಾನಿಯಂತ್ರಿತ ವೋಲ್ವೋ (ಐರಾವತ) ಬಸ್‌ಗಳ ಕಾರ್ಯಾಚರಣೆ ಮಾಡುವುದು ಕಷ್ಟಸಾಧ್ಯವಾಗಿರುವುದರಿಂದ ಕೆ.ಎಸ್.ಆರ್.ಟಿ.ಸಿಯಿಂದ ಹವಾನಿಯಂತ್ರಿತ ವೋಲ್ವೋ ಬಸ್ (ಐರಾವತ) ಬಸ್‌ಗಳ ಸೌಲಭ್ಯ ಕಲ್ಪಿಸಿರುವುದಿಲ್ಲ. ಪ್ರತಿನಿತ್ಯ ಬೆಂಗಳೂರಿನಿಂದ ಶ್ರೀ ಮಲೈಮಹದೇಶ್ವರ ಬೆಟ್ಟಕ್ಕೆ 15 ವೇಗದೂತ ಸಾರಿಗೆಇ ಕಾರ್ಯಾಚರಣೆಯಲ್ಲಿದೆ. ಮೈಸೂರಿನಿಂದ 20 ವೇಗದೂತ ಬಸ್‌ಗಳು ಕಾರ್ಯಾಚರಣೆಯಲ್ಲಿವೆ. ಮೈಸೂರು, ಬೆಂಗಳೂರು, ಚಾಮರಾಜನಗರ, ರಾಮನಗರ, ಮಂಡ್ಯ, ಕೋಲಾರ, ಶಿವಮೊಗ್ಗ ಮುಂತಾದ ಸ್ಥಳಗಳಿಗೆ ಒಟ್ಟಾರೆ 73 ವೇಗದೂತ ಸಾರಿಗೆಗಳನ್ನು ಪ್ರತಿನಿತ್ಯ ಕಾರ್ಯಚರಣೆ ಮಾಡಲಾಗುತಿದೆ. ಬೆಟ್ಟದಲ್ಲಿ ನಡೆಯುವ ವಿವಿಧ ಜಾತ್ರೆಗಳು, ಅಮಾಸ್ಯೆ, ಹುಣ್ಣಿಮೆ ಮುಂತಾದ ದಿನಗಳಲ್ಲಿ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಆಚರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ರಸ್ತೆಗಳನ್ನು ಪರಿಶೀಲಿಸಿ ವೋಲ್ವೋ ಬಸ್‌ಗಳ ಬದಲಾಗಿ ಬೇರೆ ಮಾದರಿಯ ಹವಾನಿಯಂತ್ರಿತ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಸದನದಲ್ಲಿ ತಿಳಿಸಿದರು.

**ದಮನಿತ ಮಹಿಳೆಯರಿಗಾಗಿ ಕೌಶಲ್ಯ ತರಬೇತಿ ಮತ್ತು ಘಟಕ ಸ್ಥಾಪನೆ – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರ ಉತ್ತರ .**

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ) : ದಮನಿತ ಮಹಿಳೆಯರಿಗಾಗಿ ಕೌಶಲ್ಯ ತರಬೇತಿ ಮತ್ತು ಘಟಕ ಸ್ಥಾಪನೆ ಕ್ರಮವಹಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ತಿಳಿಸಿದರು.

ವಿಧಾನಪರಿಷತ್ತಿನಲ್ಲಿ ನಡೆದ ಪ್ರಶ್ನೋತ್ತರ ವೇಳೆ ಡಾ. ಜಯಮಾಲ ರಾಮಚಂದ್ರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, 2019-20ನೇ ಸಾಲಿನಲ್ಲಿ ರೂ. 11.50 ಕೋಟಿ ಅನುದಾನದ ಪೈಕಿ 1000 ದಮನಿತ ಮಹಿಳೆಯರಿಗೆ ತರಬೇತಿ ನೀಡಲು ಅಗತ್ಯವಿರುವ ಅನುದಾನ ರೂ. 3.50 ಕೋಟಿಗಳಲ್ಲಿ ವೆಚ್ಚ ಭರಿಸಲು ಅನುಮೋದನೆ ದೊರಕಿದೆ ಹಾಗೂ 1.50 ಕೋಟಿಮಹಿಳಾ ತರಬೇತಿ ಯೋಜನೆಯಿಂದ ಬಿಡುಗಡೆ ಮಾಡಲಾಗಿದೆ.

ದಮನಿತ ಮಹಿಳೆಯರ ಘಟಕ ಪ್ರಾರಂಭಿಸಲು ರೂ. 10.00 ಕೋಟಿಗಳನ್ನು ಒದಗಿಸಿದ್ದು, ಇದು ಬಂಡವಾಳ ಶೀರ್ಷಿಕೆ ಅಡಿ ಭರಿಸಲು ಸಾಧ್ಯವಾಗದ ಕಾರಣ ರಾಜಸ್ವ ಲೆಕ್ಕಶೀರ್ಷಿಕೆಯಡಿ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯನ್ನು ಕೋರಲಾಗಿದೆ. ಅನುದಾನ ಬಿಡುಗಡೆಯಾದ ನಂತರ ಕೂಡಲೇ ಘಟಕಗಳನ್ನು ಸ್ಥಾಪಿಸಲು ಕ್ರಮವಹಿಸಲಾಗುವುದು. 2020-21ನೇ ಸಾಲಿನಲ್ಲಿ ಚೇತನ ಯೋಜನೆಯಡಿ ಒದಗಿಸಲಾಗಿರುವ ರೂ. 4.00 ಕೋಟಿಗಳ ಪೈಕಿ ರೂ. 2.00 ಕೋಟಿಗಳನ್ನು ದಮನಿತ ಮಹಿಳೆಯರ ಘಟಕ ಸ್ಥಾಪನೆ ಮಾಡಲು ನಿಗದಿಪಡಿಸಲಾಗಿದೆ ಎಂದು ಸಚಿವರು ತಿಳಿಸಿದರು.

2019-20ನೇ ಸಾಲಿನಲ್ಲಿ ಪರಿಸಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಬಳಕೆಯಾಗದ ಅನುದಾನದಡಿ ಉದ್ಯೋಗಿನಿ ಹಾಗೂ ಸಮೃದ್ಧಿ ಯೋಜನೆಯಡಿ ಅನುಕ್ರಮವಾಗಿ ಪರಿಶಿಷ್ಟ ಜಾತಿಗೆ ಸಾರಿದ ಫಲಾನುಭವಿಗಳಿಗೆ ರೂ. 15.54 ಕೋಟಿ ಮತ್ತು ರೂ. 3.00 ಕೋಟಿ ಹಾಗೂ ಪರಿಶಿಷ್ಟ ಪಂಗಡದ ಫಲನಾನುಭವಿಗಳಿಗೆ ರೂ. 8.00 ಕೋಟಿ ಮತ್ತು ರೂ. 5.00 ಕೋಟಿ ನಿಗದಿಯಾಗಿದೆ. ಫಳನುಭವಿಗಳನ್ನು ಆಯ್ಕೆ ಮಾಡುವಾಗ ದಮನಿತ ಮಹಿಳೆಯರಿಗೆ ಆದ್ಯತೆ ನೀಡಲಾಗುತ್ತದೆ ಸಂದು ಸಚಿವರು ಸದನದಲ್ಲಿ ತಿಳಿಸಿದರು.

## **ಕಲಬುರಗಿ ಮತ್ತು ಯಾದಗಿರಿ ರಸ್ತೆಗಳ ಅಭಿವೃದ್ಧಿ – ಗ್ರಾಮೀಣಾಭಿವೃದ್ಧಿ ಸಚಿವರ ಉತ್ತರ.**

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ) : ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ರಸ್ತೆಗಳ ನಿರ್ಮಾಣಕ್ಕೆ ಕ್ರಮ ವಹಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವರು ತಿಳಿಸಿದರು.

ವಿಧಾನಪರಿಷತ್ತಿನಲ್ಲಿ ನಡೆದ ಪ್ರಶ್ನೋತ್ತರ ವೇಳೆ ಬಿ.ಜಿ.ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಕಳೆದ 4 ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯ 7 ಕಾಮಗಾರಿಗಳು ಮತ್ತು ಯಾದಗಿರಿ ಜಿಲ್ಲೆಯ 5 ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಸದರಿ ಕಾಮಗಾರಿಗಳನ್ನು ಪ್ರಸ್ತುತ ವಾರ್ಷಿಕ ನಿರ್ವಹಣೆಯ ಹಂತದಲ್ಲಿರುತ್ತದೆ. ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ ನಿರ್ಮಿಸಲಾಗಿರುವ ರಸ್ತೆಗಳು ಪ್ರಸ್ತುತ ವಾರ್ಷಿಕ ಕಾರ್ಯ ನಿರ್ವಹಣೆಯ ಹಂತದಲ್ಲಿರುವುದರಿಂದ ಯಾವುದೇ ಕಾಮಗಾರಿಗಳು ಹದಗೆಟ್ಟಿರುವುದಿಲ್ಲ. 2016-17ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಈಗಾಗಲೇ ನಿರ್ಮಿಸಲಾಗಿರುವ ರಸ್ತೆಗಳನ್ನು ಪುನರ್ ಡಾಂಬರೀಕರಣ ಮಾಡಲು ಪ್ರೋತ್ಸಾಹ ಧನ ನೀಡಲಾಗಿದೆ. ಕಲಬುರಗಿ ಜಿಲ್ಲೆಯಲ್ಲಿ 5 ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಪೂರ್ಣಗೊಂಡಿರುತ್ತವೆ. 2019-20ನೇ ಸಾಲಿಗೆ 11 ಕಾಮಗಾರಿಗಳು ಅನುಮೋದನೆಗೊಂಡಿದ್ದು ಅಂದಾಜು ಪಟ್ಟಿಗೆ ಮಂಜೂರಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಹಂತ –3 ರಡಿ ಕಲಬುರಗಿ ಜಿಲ್ಲೆಗೆ 260 ಕಿ.ಮೀ ಉದ್ದದ ರಸ್ತೆ, ಯಾದಗಿರಿ ಜಿಲ್ಲೆಗೆ 132 ಕಿ.ಮೀ ಉದ್ದದ ರಸ್ತೆಗಳು ಹಂಚಿಕೆಯಾಗಿವೆ. ಕಲಬುರಗಿ ಜಿಲ್ಲೆಯಲ್ಲಿ 214.648 ಕಿ.ಮೀ ಮತ್ತು ಯಾದಗಿರಿ ಜಿಲ್ಲೆಯಲ್ಲಿ 55.25 ಕಿ.ಮೀ ಉದ್ದದ ರಸ್ತೆ ಕಾಮಗಾರಿಗಳ ಡಿ.ಪಿ.ಆರ್. ಅಂತಿಮಗೊಂಡಿದೆ. ಬಾಕಿ ಉಳಿದಿರುವ ರಸ್ತೆಗಳ ಉದ್ದಕ್ಕೆ ಡಿ.ಪಿ.ಆರ್. ತಯಾರಿಕೆ ಹಂತದಲ್ಲಿದ್ದು ಟೆಂಡರ್ ಕರೆಯುವ ಹಂತದಲ್ಲಿವೆ. ಟೆಂಡರ್ ಕರೆದು ಅರ್ಹ ಬಿಡ್ ದಾರರಿಗೆ ಕಾಯಾದೇಶ ನೀಡಲು ಕ್ರಮ ವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

## ಕಾಲರಾ ತಡೆಗಟ್ಟುವ ನಿಟ್ಟಿನಲ್ಲಿ ಬೆಂಗಳೂರು ಜಲಮಂಡಳಿಯ ವತಿಯಿಂದ

ಬೆಂಗಳೂರು, ಮಾರ್ಚಿ 20 (ಕರ್ನಾಟಕ ವಾರ್ತೆ):

ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. **ಕಾಲರಾ ಮತ್ತು ಜಿ.ಇ**. ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆ (Health & Family Welfare Department, Government Epidemic Disease Hospital, Bangalore) ಯಿಂದ ದಿನಾಂಕ 18.03.2020 ರಿಂದ 19.03.2020 ರಂದು ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ, ಪರೀಕ್ಷೆಗೆ ಒಳಪಡಿಸಲಾಗಿದೆ

ದಿನಾಂಕ: 18.03.2020 ರಿಂದ 19.03.2020 ರವರೆಗೆ ದಾಖಲುಗೊಂಡ ಒಟ್ಟು 10 ಪ್ರಕರಣಗಳಲ್ಲಿ 4 ಪ್ರಕರಣಗಳಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ಇಂದು ನೀರು ಸರಬರಾಜು ಇಲ್ಲದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 2 ಪ್ರಕರಣಗಳಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗೆ ನೀಡಲಾಗಿದ್ದು, ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 4 ಪ್ರಕರಣಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

## ದಾಖಲಾತಿಗಳ ಪರಿಶೀಲನೆಯನ್ನು ಅನಿರ್ದಿಷ್ಟ ಅವಧಿಗೆ ಮುಂದೂಡಿಕೆ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ): ಬೆಂಗಳೂರು ಜಲ ಮಂಡಳಿಯ ದಿನಾಂಕ; 24.08.2018 ರ ನೇರ ನೇಮಕಾತಿ ಅಧಿಸೂಚನೆ ಅನ್ವಯ ವಿವಿಧ ವೃಂದಗಳಿಗೆ ಅಭ್ಯರ್ಥಿಗಳನ್ನು 1:5 ಅನುಪಾತದಲ್ಲಿ ಮೂಲ ದಾಖಲೆಗಳ ಪರಶೀಲನೆಯನ್ನು ದಿನಾಂಕ :27.03.2020, 30.3.2020 ಹಾಗೂ 31.3.2020 ನಡೆಸಲಾಗುವುದೆಂದು ಈ ಹಿಂದೆ ತಿಳಿಸಲಾಗಿತ್ತು. ಪ್ರಸ್ತುತ ರಾಜ್ಯದಲ್ಲಿ ಕೊರೊನಾ(COVID-19) ವೈರಸ್ ವ್ಯಾಪಕವಾಗಿ ಹರಡುತ್ತಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಮೂಲ ದಾಖಲಾತಿಗಳ ಪರಿಶೀಲನೆಯನ್ನು ಅನಿರ್ದಿಷ್ಟ ಅವಧಿಯವರೆಗೆ ಮುಂದೂಡಲಾಗಿರುತ್ತದೆ. ಹೆಚ್ಚಿನ ಮಾಹಿತಿಗೆ ಮಂಡಳಿಯ ಅಧಿಕೃತ ವೆಬ್‌ಸೈಟ್ www.bwssb.gov.in ಅನ್ನು ವೀಕ್ಷಿಸಬಹುದಾಗಿದೆ".

## ಬಿಎಂಟಿಸಿ ಯಿಂದ ಟಿಕೇಟ್ ರಹಿತ ಪ್ರಯಾಣಿಕರಿಂದ ದಂಡ ವಸೂಲಿ

ಬೆಂಗಳೂರು, ಮಾರ್ಚ್ 20 (ಕರ್ನಾಟಕ ವಾರ್ತೆ): ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು

ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ಸಂಸ್ಥೆಯ ತನಿಖಾ ತಂಡಗಳು ಫೆಬ್ರವರಿ-2020 ರ ಮಾಹೆಯಲ್ಲಿ ಒಟ್ಟು 17,134 ಟ್ರಿಪ್ ಗಳನ್ನು ತಪಾಸಿಸಿ, 5127 ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆಹಚ್ಚಿ, ಅವರಿಂದ ಒಟ್ಟು ರೂ. 8,96,150/- ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರುಗಳ ವಿರುದ್ಧ 2373 ಪ್ರಕರಣಗಳನ್ನು ದಾಖಲಿಸಿರುತ್ತಾರೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 274 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 27,400/- ಗಳನ್ನು ಮೋಟರು ವಾಹನ ಕಾಯ್ದೆ 1988 ಕಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ.

ಒಟ್ಟಾರೆಯಾಗಿ ಫೆಬ್ರವರಿ-2020ರ ಮಾಹೆಯಲ್ಲಿ 5401 ಪ್ರಯಾಣಿಕರಿಂದ ಒಟ್ಟು ರೂ. 9,23,550/-ದಂಡವನ್ನು ವಸೂಲಿ ಮಾಡಲಾಗಿದೆ.

ಪ್ರಯಾಣಿಕರು ಬೆಂಗಳುರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಅಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಕೋರಲಾಗಿದೆ.

## CANCELLATION OF TRAINS

Bengaluru, March 18 (Karnataka Information) :

Following trains are cancelled temporarily in view of poor patronization due to outbreak of COVID-19:-

1. Train No.11047 Miraj-Hubballi Express is cancelled from 20.03.2020 to 31.03.2020
2. Train No.11048 Hubballi-Miraj Express is cancelled from 20.03.2020 to 31.03.2020

3. Train No.11304 Kolhapur-Manuguru Express is cancelled from 20.03.2020 to 31.03.2020
4. Train No.11303 Manuguru- Kolhapur Express is cancelled from 20.03.2020 to 31.03.2020 says South Western Railway-Huballi Division Press Release

## ಸಚಿವರ ಪ್ರವಾಸ

ಬೆಂಗಳೂರು, ಮಾರ್ಚ 20 (ಕರ್ನಾಟಕ ವಾರ್ತೆ): ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರಾದ ಎಸ್.ಸುರೇಶ್ ಕುಮಾರ್ ಅವರು ಮಾರ್ಚ್ 21 ರಂದು ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅಂದೇ ಕೇಂದ್ರ ಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.